ನೀಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಗೊತ್ತಿದೆ.

ಆ) 1ರಿಂದ 10 ನೇ ತರಗತಿವರೆಗೆ ಗ್ರಾಮಾಂತರ ಪ್ರದೇಶದಲ್ಲಿ ವ್ಯಾಸಂಗ ಮಾಡಿದವರಿಗೆ ಗ್ರಾಮೀಣ ಕೃಪಾಂಕ ನೀಡಲು ಹಾಲಿ ನಿಯಮಗಳಲ್ಲಿ ಅವಕಾಶವಿದೆ, ಭಾಗಶಃ ಗ್ರಾಮಾಂತರದಲ್ಲಿ ವ್ಯಾಸಂಗ ಮಾಡಿದವರಿಗೆ ಅಷ್ಟು ವರ್ಷಗಳವರೆಗೆ ಕೃಪಾಂಕ ನೀಡಲು ಹಾಲಿ ನಿಯಮದಲ್ಲಿ ಅವಕಾಶವಿಲ್ಲ.

ಮೊಳಕಾಲ್ಮೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ

3042:(4151)

ಶ್ರೀ ಎಸ್.ವೈ.ಗೋಪಾಲಕೃಷ್ಣ (ಮೊಳಕಾಲ್ಮೂರು) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಳಕಾಲ್ಮೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಹೊಸಕಟ್ಟಡದ ಕೆಲಸವನ್ನು ಯಾವಾಗ ಪ್ರಾರಂಭಿಸಲಾಯಿತು?

ಆ) ಇದಕ್ಕಾಗಿ ತಗಲುವ ಅಂದಾಜು ವೆಚ್ಚವೆಷ್ಟು?

ಇ) 1998-99ರಲ್ಲಿ ಈ ಕಾಮಗಾರಿಗಾಗಿ ಸರ್ಕಾರ ಮಂಜೂರು ಮಾಡಿರುವ ಹಣವೆಷ್ಟು?

ಈ) ಈ ಕಟ್ಟಡದ ಕೆಲಸವನ್ನು ಯಾವಾಗ ಪೂರ್ಣಗೊಳಿಸುವುದು?

ಶ್ರೀ ಬಸವರಾಜ್ ಪಾಟೀಲ್ ಅಟ್ಟೂರು (ಉನ್ನತ ಶಿಕ್ಷಣ ಸಚಿವರು):

ಅ) ಕಾಲೇಜಿನ ಹೊಸ ಕಟ್ಟಡದ ಕೆಲಸ ಪ್ರಾರಂಭವಾಗಿರುವುದಿಲ್ಲ.

ಆ) ಲೋಕೋಪಯೋಗಿ ಇಲಾಖೆಯಿಂದ ರೂ.35.00 ರಿಂದ 40.00 ಲಕ್ಷಗಳ ಮಿತಿಯಲ್ಲಿ ಅಂದಾಜು ಮತ್ತು ನಕ್ಷೆಯನ್ನು ನಿರೀಕ್ಷಿಸಲಾಗಿದೆ.

ಇ) 1998-99ನೇ ಸಾಲಿಗೆ ಈ ಕಾಮಗಾರಿಗಾಗಿ ರೂ.12.00 ಲಕ್ಷವನ್ನು ಒದಗಿಸಲಾಗಿದೆ.

ಈ) ಲೋಕೋಪಯೋಗಿ ಇಲಾಖೆಯವರಿಗೆ ಸದರಿ ಕಾಮಗಾರಿಯನ್ನು ಶೀಘ್ರವಾಗಿ ವಹಿಸಲಾಗುವುದು

ಮೊಳಕಾಲ್ಮೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಹುದ್ದೆ ಭರ್ತಿ.

3043:(3539)

ಎನ್.ವೈ.ಗೋಪಾಲಕೃಷ್ಣ (ಮೊಳಕಾಲ್ಮೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಳಕಾಲ್ಮೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಮಂಜೂರಾದ ಉಪನ್ಯಾಸಕರ ಹುದ್ದೆಗಳೆಷ್ಟು?

ಆ) ಇವುಗಳ ಪೈಕಿ ಯಾವ ಯಾವ ವಿಷಯಕ್ಕೆ ಸಂಬಂಧಿಸಿದ ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ?

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಸವರಾಜ್ ಪಾಟೀಲ್ ಆಟ್ಟೂರ್ (ಉನ್ನತ ಶಿಕ್ಷಣ ಸಚಿವರು):

ಅ) 06

ಆ) ಕನ್ನಡ, ಸಮಾಜಶಾಸ್ತ್ರ ಮತ್ತು ಅರ್ಥಶಾಸ್ತ್ರ ವಿಷಯದ ಹುದ್ದೆಗಳು ಖಾಲಿ ಇವೆ.

ಇ) ಖಾಲಿ ಹುದ್ದೆಗಳನ್ನು ಖಾಯಂ ನೇಮಕಾತಿ ಮೂಲಕ ಆದಷ್ಟು ಶೀಘ್ರದಲ್ಲಿ ಭರ್ತಿ ಮಾಡಲು ಉದ್ದೇಶಿಸಲಾಗಿದೆ. ಇದನ್ನು ಕಾಯ್ದಿರಿಸಿ ವರ್ಗಾವಣೆ ಸೂಕ್ತವೆಂದು ಕಂಡುಬಾರದಿದ್ದಲ್ಲಿ ಆರೆಕಾಲಿಕ ಉಪನ್ಯಾಸಕರನ್ನು ನೇಮಕಾತಿ ಮಾಡುವ ಮೂಲಕ ಮತ್ತು ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಮೂಲಕ ಹುದ್ದೆಗಳನ್ನು ತುಂಬಲು ಕ್ರಮ ಜರುಗಿಸಲಾಗುವುದು.

ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಔಷಧಿಗಳ ಸರಬರಾಜು

3044:(4152)